ವಿದ್ಯುತ್ ಅಭಾವ ನೀಗಿಸುವುದು

1890(782); ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಅಥಣಿ)

ಅ) ಬೆಳಗಾವಿ ಜಿಲ್ಲೆ ಅಥಣಿ ತಾಲ್ಲೂಕಿನಲ್ಲಿ ವಿದ್ಯುತ್ ಕೊರತೆ ಇರುವುದು ನಿಜವೇ;

ಆ) ಹಾಗಿದ್ದಲ್ಲಿ, ವಿದ್ಯುತ್ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಇ) ಬೆಳಗಾವಿ ಜಿಲ್ಲೆಗೆ ತಿಂಗಳಿಗೆ ಎಷ್ಟು ಮೆಗಾವ್ಯಾಟ್ ವಿದ್ಯುತ್ ನೀಡಲಾಗುತ್ತಿದೆ; ಇದರಲ್ಲಿ ಅಥಣಿ ತಾಲ್ಲೂಕಿಗೆ ಎಷ್ಟು ಮೆಗಾವ್ಯಾಟ್ ವಿದ್ಯುತ್ ನೀಡಲಾಗುತ್ತಿದೆ (ಸಂಪೂರ್ಣ ಮಾಹಿತಿ ನೀಡುವುದು);

ಈ) ವಿದ್ಯುತ್ ಕೊರತೆ ಇರುವುದರಿಂದ ರೈತರ ಪಂಪ್‌ಸೆಟ್‌ಗಳಿಗೆ ತಾಲ್ಲೂಕಿನಾದ್ಯಂತ ರೈತರಿಗೆ ತೊಂದರೆಯಾಗುತ್ತಿರುವುದರಿಂದ ಪ್ರಸ್ತುತ ನೀಡುತ್ತಿರುವ ಮೆಗಾವ್ಯಾಟ್‌ಗಿಂತ ಹೆಚ್ಚಿಗೆ ವಿದ್ಯುತ್ ನೀಡಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಡಿ.ಕೆ. ಶಿವಕುಮಾರ್ (ಇಂಧನ ಸಚಿವರು)

ಅ) **ಯಿಂದ** ಇ) **ವರೆಗೆ** ರಾಜ್ಯದಲ್ಲಿ ವಿದ್ಯುತ್ ಕೊರತೆಯನ್ನು ಸ್ವಲ್ಪಮಟ್ಟಿಗೆ ನೀಗಿಸಲು ಸರ್ಕಾರವು ಅಲ್ಪಾವಧಿ ಹಾಗೂ ಮಧ್ಯಮಾವಧಿ ಆಧಾರದಲ್ಲಿ ವಿದ್ಯುತ್ ಖರೀದಿ ಮಾಡುತ್ತಿದೆ ಹಾಗೂ ಹೊಸ ವಿದ್ಯುತ್ ಉತ್ಪಾದನಾ ಘಟಕಗಳನ್ನು ಸ್ಥಾಪಿಸುವ ಮೂಲಕ ವಿದ್ಯುತ್ ಕೊರತೆಯನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಬೆಳಗಾವಿ ಜಿಲ್ಲೆಗೆ ದಿನವಹಿ 361 ರಿಂದ 460 ಮೆ.ವ್ಯಾ.ನಷ್ಟು ವಿದ್ಯುತ್ ಹಂಚಿಕೆ ಮಾಡಲಾಗಿದ್ದು, ಈ ಪೈಕಿ ಅಥಣಿ ತಾಲ್ಲೂಕಿಗೆ 62 ರಿಂದ 84 ಮೆ.ವ್ಯಾ.ನಷ್ಟು ವಿದ್ಯುತ್ ಹಂಚಿಕೆಯಾಗಿರುತ್ತದೆ.

ಈ) ಪ್ರಸ್ತುತ ರಾಜ್ಯದಲ್ಲಿ ವಿದ್ಯುತ್ ಬೇಡಿಕೆಯು ಲಭ್ಯತೆಗಿಂತ ಅಧಿಕವಾಗಿದ್ದು, ಕೊರತೆಯನ್ನು ನೀಗಿಸಲು ಸರ್ಕಾರವು ಹೊಸ ವಿದ್ಯುತ್ ಉತ್ಪಾದನಾ ಯೋಜನೆಗಳನ್ನು ಹಮ್ಮಿಕೊಂಡಿರುತ್ತದೆ. ವಿದ್ಯುತ್ ಉತ್ಪಾದನೆಯು ಹೆಚ್ಚಾದ ನಂತರ ಲಭ್ಯತೆಯನ್ನು ಆಧರಿಸಿ ಅಥಣಿ ತಾಲ್ಲೂಕಿಗೆ ಹೆಚ್ಚಿನ ವಿದ್ಯುತ್ ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದು.

ರಾಜ್ಯ ಹೆದ್ದಾರಿಗಳು ಹಾಗೂ ರಾಷ್ಟ್ರೀಯ ಸುಧಾರಣೆಗೆ ಬಿಡುಗಡೆ

1891(1374); ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಅಥಣಿ)

ಅ) ಬೆಳಗಾವಿ ಜಿಲ್ಲೆ ಅಥಣಿ ವಿಧಾನ ಸಭಾ ಕ್ಷೇತ್ರದಲ್ಲಿ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳು ಎಷ್ಟು ಕಿಮೀ. ವ್ಯಾಪ್ತಿ ಹೊಂದಿದೆ;. ಅವು ಯಾವುವು (ವಿವರ ನೀಡುವುದು).

ಆ) ಕಳೆದ 2 ವರ್ಷಗಳಿಂದ ರಾಜ್ಯ ಹೆದ್ದಾರಿ ಹಾಗೂ ರಾಷ್ಟ್ರೀಯ ಹೆದ್ದಾರಿಗಳ ಸುಧಾರಣೆಗೆ ಬಿಡುಗಡೆ ಮಾಡಿರುವ ಹಣವೆಷ್ಟು? (ವರ್ಷವಾರು ಸಂಪೂರ್ಣ ವಿವರ ನೀಡುವುದು)

ಇ) ಸದರಿ ರಸ್ತೆಗಳ ಸುಧಾರಣೆಗಾಗಿ ಬಿಡುಗಡೆಯಾದ ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲಾಗಿದೆಯೇ? (ವಿವರ ನೀಡುವುದು).

ಡಾ॥ ಹೆಚ್.ಸಿ. ಮಹದೇವಪ್ಪ (ಲೋಕೋಪಯೋಗಿ ಸಚಿವರು)

ಅ) ಬೆಳಗಾವಿ ಜಿಲ್ಲೆಯ ಅಥಣಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಹೆದ್ದಾರಿಗಳು ಇರುವುದಿಲ್ಲ. ಆದರೆ 119.66 ಕಿಮೀ. ಉದ್ದದ ಮೂರು ರಾಜ್ಯ ಹೆದ್ದಾರಿಗಳಿರುತ್ತವೆ. ಅವುಗಳ ವಿವರ ಈ ಕೆಳಕಂಡಂತಿದೆ:

ಕ್ರ.ಸಂ.	ರಾಜ್ಯ ಹೆದ್ದಾರಿ ವಿವರ	ಉದ್ದ (ಕಿಮೀ.ಗಳಲ್ಲಿ)
1	ರಾಜ್ಯ ಹೆದ್ದಾರಿ–12 ವಿಜಯಪುರ ಸಂಕೇಶ್ವರ	48.20
2	ರಾಜ್ಯ ಹೆದ್ದಾರಿ–31 ಜತ್–ಜಾಂಬೋಟಿ	25.00
3	ರಾಜ್ಯ ಹೆದ್ದಾರಿ 72 ನಿಪ್ಪಾಣಿ–ಕೊಟ್ಟಲಗಿ ರಸ್ತೆ (ರಾಜ್ಯ ಗಡಿಯವರೆಗೆ)	46.46
	ಒಟ್ಟು	**119.66**